**ಕರ್ನಾಟಕ ಸರ್ಕಾರ**

ಸಂಖ್ಯೆ:ಲೋಇ 111 ಸಿಆರ್‌ಎಂ 2005

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಕಾಸಸೌಧ,
ಬೆಂಗಳೂರು, ದಿನಾಂಕ:09-8-2005.

**ಸುತ್ತೋಲೆ**

ವಿಷಯ: ರಾಜ್ಯದ ಹೆದ್ದಾರಿಗಳಲ್ಲಿ ಅವೈಜ್ಞಾನಿಕವಾಗಿ ಹಾಕಿರುವ ರಸ್ತೆ ಉಬ್ಬುಗಳನ್ನು ತೆಗೆಯುವ ಬಗ್ಗೆ

ರಾಜ್ಯದ ಹೆದ್ದಾರಿ ಮತ್ತು ರಾಷ್ಟ್ರೀಯ ಹೆದ್ದಾರಿಗಳಲ್ಲಿ ಅನೇಕ ಕಡೆ ರಸ್ತೆ ಉಬ್ಬುಗಳನ್ನು ಅವೈಜ್ಞಾನಿಕವಾಗಿ ಹಾಕಿರುವುದು ಕಂಡುಬಂದಿರುತ್ತದೆ. ಇದರಿಂದ ವಾಹನಗಳು ಸುಗಮವಾಗಿ ಸಂಚರಿಸಲು ಅಡಚಣೆ ಉಂಟಾಗುತ್ತಿದ್ದು ಅನೇಕ ಬಾರಿ ಇದರಿಂದ ಅಪಘಾತಗಳು ಸಂಭವಿಸಿರುತ್ತವೆ. ಯಾವುದೇ ಹೆದ್ದಾರಿಯಲ್ಲಿ ರಸ್ತೆ ಉಬ್ಬುಗಳನ್ನು ನಿರ್ಮಿಸುವುದು ವಾಹನ ಸಂಚಾರದ ದೃಷ್ಟಿಯಿಂದ ಸಾಧುವಾಗಿರುವುದಿಲ್ಲ. ಸಾಧ್ಯವಾದಷ್ಟು ಮಟ್ಟಿಗೆ ರಸ್ತೆ ಉಬ್ಬುಗಳನ್ನು ನಿರ್ಮಿಸುವುದನ್ನು ಕಡಿಮೆ ಮಾಡಬೇಕಾಗಿರುತ್ತದೆ. ಈ ಬಗ್ಗೆ ಸದನದಲ್ಲಿ ಅನೇಕ ಸದಸ್ಯರು ತಮ್ಮ ಅಭಿಪ್ರಾಯವನ್ನು ಸೂಚಿಸಿರುತ್ತಾರೆ. ಒಂದು ವೇಳೆ ರಸ್ತೆಯ ಉಬ್ಬುಗಳನ್ನು ಶಾಲಾ ಕಾಲೇಜುಗಳ ಬಳಿ ನಿರ್ಮಿಸುವುದು ಅತ್ಯವಶ್ಯವಾಗಿದ್ದಲ್ಲಿ ಕೇಂದ್ರ ಸರ್ಕಾರದ ಹೆದ್ದಾರಿ ಮತ್ತು ರಸ್ತೆ ಸಾರಿಗೆ ಮಂತ್ರಾಲಯದವರು ಹೊರಡಿಸಿರುವ ವಿಶಿಷ್ಟ ವಿವರಣೆಯ ಪ್ರಕಾರ ರಂಬಲ್ ಸ್ಟ್ರಿಪ್ ಅಥವಾ ಐ.ಆರ್‌ಸಿ 99 ಪ್ರಕಾರ ರಸ್ತೆ ಉಬ್ಬುಗಳನ್ನು ನಿರ್ಮಿಸಬೇಕಾಗಿರುತ್ತದೆ. ಹೆದ್ದಾರಿಗಳನ್ನು ಅವೈಜ್ಞಾನಿಕ ರಸ್ತೆ ಉಬ್ಬುಗಳನ್ನು ತೆಗೆಯಲು ಕೂಡಲೇ ಕ್ರಮ ತೆಗೆದುಕೊಳ್ಳಲು ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಲಾಗಿದೆ.

(ಟಿ.ಸುಕುಮಾರ್)
ಸರ್ಕಾರದ ಕಾರ್ಯದರ್ಶಿ,
ಲೋಕೋಪಯೋಗಿ ಇಲಾಖೆ.

ಇವರಿಗೆ:

1. ಮುಖ್ಯ ಇಂಜಿನಿಯರ್, ಸಂಪರ್ಕ ಮತ್ತು ಕಟ್ಟಡಗಳು (ದಕ್ಷಿಣ), ಬೆಂಗಳೂರು
2. ಮುಖ್ಯ ಇಂಜಿನಿಯರ್, ಸಂಪರ್ಕ ಮತ್ತು ಕಟ್ಟಡಗಳು (ಉತ್ತರ), ಧಾರವಾಡ.
3. ಮುಖ್ಯ ಇಂಜಿನಿಯರ್, ರಾಷ್ಟ್ರೀಯ ಹೆದ್ದಾರಿಗಳು, ಬೆಂಗಳೂರು
4. ಎಲ್ಲಾ ಅಧೀಕ್ಷಕ ಇಂಜಿನಿಯರ್‌ಗಳಿಗೆ.

ಪ್ರತಿಯನ್ನು ಮಾಹಿತಿಗಾಗಿ:

1. ಮಾನ್ಯ ಲೋಕೋಪಯೋಗಿ ಸಚಿವರ ಆಪ್ತ ಕಾರ್ಯದರ್ಶಿಯವರಿಗೆ.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಲೋಕೋಪಯೋಗಿ ಇಲಾಖೆ.